# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 613/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿ : ಶಿವಶಂಕರ್ ಬಿನ್ ಲೇಟ್ ದೇಶಲಿಂಗಯ್ಯ, 24 ವರ್ಷ,
ವಾಸಃ ಸೋಮನಾಥಪುರ ಗ್ರಾಮ,
ಬನ್ನೂರು ಹೋಬಳಿ, ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 03.11.2024 ರಂದು ಸಂಜೆ 6.30 ಗಂಟೆ ಸಮಯದಲ್ಲಿ ಬನ್ನೂರು ಪೋಲೀಸ್ ಠಾಣಾ ವ್ಯಾಪ್ತಿಯ ಸೋಮನಾಥಪುರ ಗ್ರಾಮದ ಗ್ರಾಮ ಪಂಚಾಯತಿ ಕಾರ್ಯಾಲಯ ಮುಂಭಾಗದಲ್ಲಿ ಇರುವ ನಾಗೇಶ @ ಕಾಮಣ್ಣರವರ ಅಂಗಡಿ ಮುಂಭಾಗದ ಸಿಮೆಂಟ್ ರಸ್ತೆಯಲ್ಲಿ ಚಾಸಾ–1 ನಟರಾಜು.ಬಿ ರವರು ಕಾರನ್ನು ನಿಲ್ಲಿಸಿದಾಗ ಆರೋಪಿಯಾದ ನೀವು ಚಾಸಾ–1 ರವರಿಗೆ ಬೋಳಿ ಮಗನೆ, ಬಡ್ಡಿ ಮಗನೇ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.352 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ–1 ರವರಿಗೆ ಕಲ್ಲಿನಿಂದ ಅವರ ಬಲಭಾಗದ ಎದೆಯ ಹತ್ತಿರ ಗುದ್ದಿ ಗಾಯವುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.118(1) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ–1 ರವರಿಗೆ ನಿನ್ನನ್ನು ಕೊಲೆ ಮಾಡುತ್ತೇನೆ ಎಂದು ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.351(2), 351(3) ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **19.02.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿ ಸಹಿ**